# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 916
2. ಮಾನ್ಯ ಸದಸ್ಯರ ಹೆಸರು : ಶ್ರೀ ಡಿ.ಟಿ ಶ್ರೀನಿವಾಸ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 17.12.2024
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ ಸಕ್ಕರೆ ಕಾರ್ಖಾನೆಯನ್ನು ಪುನರ್ ಶ್ಚೇತನಗೊಳಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; | ವಾಣಿ ವಿಲಾಸ ಸಕ್ಕರೆ ಕಾರ್ಖಾನೆ, ಹಿರಿಯೂರು, ಚಿತ್ರದುರ್ಗ ಜಿಲ್ಲೆ – ಈ ಕಾರ್ಖಾನೆಯನ್ನು ದುಡಿಯುವ ಬಂಡವಾಳ ಮತ್ತು ಕಬ್ಬಿನ ಕೊರತೆಯಿಂದಾಗಿ 2003-04ನೇ ಸಾಲಿನಿಂದ ಕಬ್ಬು ಅರೆಯುವ ಕಾರ್ಯದಿಂದ ಸ್ಥಗಿತಗೊಳಿಸಲಾಗಿರುತ್ತದೆ. ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲು ಆ ಭಾಗದ ಜನಪ್ರತಿನಿಧಿಗಳು, ರೈತರು ಮತ್ತು ರೈತ ಸಂಘಟನೆಗಳು ಸರ್ಕಾರಕ್ಕೆ ಮನವಿಗಳನ್ನು ಸಲ್ಲಿಸಿರುತ್ತಾರೆ. |
| (ಆ) | ಇದ್ದಲ್ಲಿ, ಸರ್ಕಾರ ಒದಗಿಸಿರುವ ಅನುದಾನ ಎಷ್ಟು; ಮತ್ತು ಪುನರ್ ಶ್ಚೇತನಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಯಾವುದೇ ಸಹಕಾರಿ ಸಕ್ಕರೆ ಕಾರ್ಖಾನೆಗಳಿಗೆ ರಾಜ್ಯ ಸರ್ಕಾರದಿಂದ ಷೇರು ಬಂಡವಾಳ/ ಅನುದಾನವನ್ನು ನೀಡುವ ನೀತಿ ಸರ್ಕಾರದ ಮುಂದೆ ಪ್ರಸ್ತುತ ಇರುವುದಿಲ್ಲ.<br><br>ವಾಣಿ ವಿಲಾಸ ಸಕ್ಕರೆ ಕಾರ್ಖಾನೆ, ಹಿರಿಯೂರು, ಚಿತ್ರದುರ್ಗ ಜಿಲ್ಲೆ - ಈ ಕಾರ್ಖಾನೆಯನ್ನು ಖಾಸಗಿಯರಿಗೆ ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸುವ ಸಂಬಂಧ 2007ನೇ ಸಾಲಿನಲ್ಲಿ ಹಲವಾರು ಬಾರಿ ಟೆಂಡರ್ ಪ್ರಕಟಣೆ ನೀಡಲಾಗಿತ್ತು. ಆದರೆ ಯಾವೊಬ್ಬ ಬಿಡ್ಡುದಾರರು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸದೇ ಇರುವುದರಿಂದ ಕಾರ್ಖಾನೆಯನ್ನು ಗುತ್ತಿಗೆ ನೀಡುವ ಸರ್ಕಾರದ ಪ್ರಯತ್ನ ಯಶಸ್ವಿಯಾಗಲಿಲ್ಲ.ಈ ಹಿನ್ನೆಲೆಯಲ್ಲಿ ದಿನಾಂಕ:30.09.2013ರಿಂದ ಈ ಕಾರ್ಖಾನೆಯನ್ನು ಸಮಾಪನಗೊಳಿಸಲಾಗಿರುತ್ತದೆ. |
| (ಇ) | ಹಿರಿಯೂರು ವಾಣಿ ವಿಲಾಸ ಸಾಗರದಲ್ಲಿ ಸಾಕಷ್ಟು ನೀರಿನ ಲಭ್ಯತೆ ಇರುವುದರಿಂದ ಹೆಚ್ಚಿನ ಕಬ್ಬು ಬೆಳೆಯಲು ರೈತರಿಗೆ ಸಹಾಯಕವಾಗುತ್ತದಲ್ಲವೇ; | ವಾಣಿ ವಿಲಾಸ ಸಕ್ಕರೆ ಕಾರ್ಖಾನೆ, ಹಿರಿಯೂರು, ಚಿತ್ರದುರ್ಗ ಜಿಲ್ಲೆ - ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಸಂಬಂಧ ಪುಣೆಯ ವಸಂತದಾದಾ ಸಕ್ಕರೆ ಸಂಸ್ಥೆ ಅಥವಾ ನ್ಯಾಷನಲ್ ಷುಗರ್ ಇನ್ಸ್‌ಟಿಟ್ಯೂಟ್ ಖಾನ್‌ಪುರ ಅಥವಾ ಇನ್ನಾವುದೇ ಪ್ರತಿಷ್ಠಿತ ಸಂಸ್ಥೆಗಳಿಂದ Techno Economic Feasibility Report ಅನ್ನು ಪಡೆದು ಸಲ್ಲಿಸುವಂತೆ ಸಹಕಾರ ಸಂಘಗಳ ಉಪನಿಬಂಧಕರು ಚಿತ್ರದುರ್ಗ ಜಿಲ್ಲೆ ಹಾಗೂ ಸಮಾಪನಾಧಿಕಾರಿಗಳು, ವಾಣಿ ವಿಲಾಸ ಸಹಕಾರಿ ಸಕ್ಕರೆ ಕಾರ್ಖಾನೆ, ಹಿರಿಯೂರು ಚಿತ್ರದುರ್ಗ ಜಿಲ್ಲೆ ಇವರಿಗೆ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ದಿನಾಂಕ:13.06.2024ರ ಪತ್ರದಲ್ಲಿ ತಿಳಿಸಲಾಗಿದ್ದು, ವರದಿಯನ್ನು ನಿರೀಕ್ಷಿಸಲಾಗಿದೆ. |
| (ಈ) | ಸಕ್ಕರೆ ಕಾರ್ಖಾನೆಯನ್ನು ಪುನರ್‌ಶ್ಚೇತನಗೊಳಿಸಿದ್ದಲ್ಲಿ, ಸ್ಥಳೀಯರಿಗೆ ಉದ್ಯೋಗಾವಕಾಶ ಲಭಿಸಿದಂತಾಗುವುದಿಲ್ಲವೇ? | |

**ಸಂಖ್ಯೆ:** ಸಿಐ 407 ಸಿಓಎಫ್ 2024

**(ಶಿವಾನಂದ ಎಸ್ ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು